# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

## ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ:25ನೇ ಮಾರ್ಚ್, 2026

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

*****

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೈದನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 7ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಎನ್. ರವಿಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:94(849) | ಮಾನ್ಯ ಲೋಕೋಪಯೋಗಿ ಸಚಿವರು |
| 7ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಶಿವಕುಮಾರ್ ಕೆ. ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:104(878) | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೈದನೇ ಪಟ್ಟಿ

## 2.ಶೂನ್ಯವೇಳೆ ಪ್ರಸ್ತಾವಗಳು

..2

## ೩. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು:**

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು.

೦೧. ಕರ್ನಾಟಕ ಸರ್ಕಾರಿ ಶೈಕ್ಷಣಿಕ ಸಂಸ್ಥೆಯ ಭೂಮಿಗಳ (ರಕ್ಷಣೆ ಮತ್ತು ಸಕ್ರಮಾತಿ) ವಿಧೇಯಕ, ೨೦೨೬

೦೨. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, ೨೦೨೬

## 4. ವರದಿಗಳನ್ನೊಪ್ಪಿಸುವುದು

ಅ. **ಶ್ರೀ ಎಂ.ಕೆ. ಪ್ರಾಣೇಶ್ (ಮಾನ್ಯ ಉಪ ಸಭಾಪತಿಗಳು ಹಾಗೂ ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿ)** ಅವರು ೨೦೨೩-೨೦೨೪ ಹಾಗೂ ೨೦೨೪-೨೫ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ ಮೂವತ್ತೊಂದನೇ ವರದಿಯನ್ನೊಪ್ಪಿಸುವುದು.

ಆ. **ಶ್ರೀ ಕೆ. ಅಬ್ದುಲ್ ಜಬ್ಬರ್ (ಸದಸ್ಯರು, ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೂರನೇ ವರದಿಯನ್ನೊಪ್ಪಿಸುವುದು.

## ೫. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

೦೧. ಕರ್ನಾಟಕ ಜ್ಞಾನಭಂಡಾರ ಹಸ್ತಪ್ರತಿಗಳು ಮತ್ತು ಡಿಜಿಟೀಕರಣ ವಿಧೇಯಕ, ೨೦೨೬
**ಶ್ರೀ ಎಚ್.ಕೆ. ಪಾಟೀಲ್ (ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ೨೦೨೬ನೇ ಸಾಲಿನ "ಕರ್ನಾಟಕ ಜ್ಞಾನಭಂಡಾರ ಹಸ್ತಪ್ರತಿಗಳು ಮತ್ತು ಡಿಜಿಟೀಕರಣ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2026

**ಶ್ರೀ ಪ್ರಿಯಾಂಕ್ ಖರ್ಗೆ (ಮಾನ್ಯ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಸರ್ಕಾರಿ ಶೈಕ್ಷಣಿಕ ಸಂಸ್ಥೆಯ ಭೂಮಿಗಳ (ರಕ್ಷಣೆ ಮತ್ತು ಸಕ್ರಮಾತಿ) ವಿಧೇಯಕ, 2026

**ಶ್ರೀ ಎಸ್. ಮಧು ಬಂಗಾರಪ್ಪ (ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷಾರತಾ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ "ಕರ್ನಾಟಕ ಸರ್ಕಾರಿ ಶೈಕ್ಷಣಿಕ ಸಂಸ್ಥೆಯ ಭೂಮಿಗಳ (ರಕ್ಷಣೆ ಮತ್ತು ಸಕ್ರಮಾತಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2026

**ಶ್ರೀ ಎಸ್. ಮಧು ಬಂಗಾರಪ್ಪ (ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷಾರತಾ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2026ನೇ ಸಾಲಿನ "ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 6. ವಿತ್ತೀಯ ಕಾರ್ಯಕಲಾಪ

2026-27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ.

**(ಒಂಭತ್ತನೇ ದಿನ)**

## 7. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಸಿ.ಟಿ. ರವಿ** ಅವರು ವಿವಿಧ ಇಲಾಖೆಗಳಲ್ಲಿ ಕಾಮಗಾರಿಯನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಬಾಕಿಯಿರುವ ಹಣವನ್ನು ಬಿಡುಗಡೆ ಮಾಡುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

2. **ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರು ಚಪ್ಪರಬಂದ, ಗೌಳಿ, ಕಾಡುಗೊಲ್ಲ, ಕುಡುಬಿ, ಕಂಜರಬಾಟ ಈ ಐದು ಸಮುದಾಯಗಳನ್ನು ಅಲೆಮಾರಿ, ಅರೆ-ಅಲೆಮಾರಿ ಜನಾಂಗಗಳು ಎಂದು ಘೋಷಿಸುವ ಬಗ್ಗೆ **ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ** ಸಚಿವರ ಗಮನ ಸೆಳೆಯುವುದು.

3. **ಶ್ರೀ ಸುನೀಲ್‌ಗೌಡ ಪಾಟೀಲ್** ಅವರು ಹೆಬ್ಬಾಳದಲ್ಲಿರುವ ವಿದ್ಯುತ್ ಚಿತಾಗಾರದಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಪರಿಣಾಮ ಉಂಟಾಗುತ್ತಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

4. **ಶ್ರೀ ಹೆಚ್.ಎಸ್. ಗೋಪಿನಾಥ್** ಅವರು ಬೆಂಗಳೂರು ಮಹಾನಗರ ಪ್ರದೇಶದ ಸಾವಿರಾರು ನಿವೇಶನ/ಮನೆಗಳ ಮಾಲೀಕರು ಆಸ್ತಿ ತೆರಿಗೆ ಪಾವತಿಸಿದ್ದರೂ ಸಹ ಗ್ರೇಟರ್ ಬೆಂಗಳೂರು ಅಥಾರಿಟಿ ವತಿಯಿಂದ ಡ್ರೋನ್ ತಂತ್ರಜ್ಞಾನ ಬಳಸಿ ತೆರಿಗೆ ಬಾಕಿ ಇದೆ ಎಂದು ಅವೈಜ್ಞಾನಿಕವಾಗಿ ನೋಟಿಸ್ ಜಾರಿಗೊಳಿಸುತ್ತಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

5. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ**. ಅವರು ಬೆಂಗಳೂರಿನ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಸುಮಾರು 22 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ 11 ಮಂದಿ ವೈದ್ಯರು ಒಂದೇ ಹುದ್ದೆಯಲ್ಲಿ ಯಾವುದೇ ಮುಂಬಡ್ತಿ ಹೊಂದದೇ ಕಾರ್ಯನಿರ್ವಹಿಸುತ್ತಿರುವುದರಿಂದ ಸರ್ಕಾರದ ಆದೇಶದನ್ವಯ ಮುಂಬಡ್ತಿ ನೀಡಲು ಆರ್ಥಿಕ ಸಲಹಾ ಸಮಿತಿಯು ದಿನಾಂಕ:15.09.2025ರ ಸಭೆಯಲ್ಲಿ ಕೈಗೊಂಡ ತೀರ್ಮಾನವನ್ನು ಸ್ಥಿರಿಕರಿಸಲಾಗಿದ್ದರೂ ಸಹ ಇದುವರೆವಿಗೂ ಜಾರಿಗೊಳಿಸದಿರುವ ಬಗ್ಗೆ **ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ** ಗಮನ ಸೆಳೆಯುವುದು.

6. **ಶ್ರೀ ಶಶೀಲ್ ಜಿ. ನಮೋಶಿ** ಅವರು ರಾಯಚೂರು ಜಿಲ್ಲೆ, ಸಿರವಾರ ತಾಲ್ಲೂಕು ಅತ್ತನೂರು ಗ್ರಾಮದ ಕೆರೆ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಿ, ಶಾಶ್ವತ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ** ಗಮನ ಸೆಳೆಯುವುದು.

..5

7. **ಶ್ರೀ ಜಗದೇವ್ ಗುತ್ತೇದಾರ್** ಅವರು ಶ್ರೀ ನಾರಾಯಣಗುರು ಅಭಿವೃದ್ಧಿ ನಿಗಮವನ್ನು ಕಂಪನಿಗಳ ಕಾಯ್ದೆಯಡಿ ನೋಂದಣಿ ಮಾಡಿದ್ದು, 2025-26ನೇ ಸಾಲಿನಲ್ಲಿ ಪ್ರತ್ಯೇಕ ಅನುದಾನ ಬಿಡುಗಡೆಯಾಗಿರುವುದಿಲ್ಲ ಹಾಗೂ 2026-27ನೇ ಸಾಲಿಗೆ ಹೊಸದಾಗಿ ನಿಗಮದ ಕಾರ್ಯಕ್ರಮಗಳನ್ನು ರೂಪಿಸದಿರುವುದರಿಂದ ಪ್ರವರ್ಗ-2ಎರಲ್ಲಿ ಕ್ರಮ ಸಂಖ್ಯೆ:4ಎ ರಿಂದ (2)ರವರೆಗಿನ ಎಲ್ಲಾ 26 ಸಮುದಾಯಗಳಿಗೆ ಅನ್ಯಾಯವಾಗುತ್ತಿರುವ ಬಗ್ಗೆ **ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ** ಗಮನ ಸೆಳೆಯುವುದು.

8. **ಶ್ರೀ ಎ. ವಸಂತ ಕುಮಾರ್** ಅವರು ಕನ್ನಡದ ಆದಿಕವಿ ಪಂಪರವರ ಹೆಸರಿನಲ್ಲಿ ಪ್ರಾಧಿಕಾರ ಅಥವಾ ಪ್ರತಿಷ್ಠಾನವನ್ನು ಸ್ಥಾಪಿಸುವ ಬಗ್ಗೆ **ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ** ಗಮನ ಸೆಳೆಯುವುದು.

9. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ತಾಲ್ಲೂಕಿನ ದಡೇಸೂಗೂರು ಗ್ರಾಮದ ಸರ್ವೆ ನಂ.81 ಮತ್ತು 84ರಲ್ಲಿ ಪರಿಶಿಷ್ಟ ಜಾತಿಯ ದೇವದಾಸಿ ಮಹಿಳೆಯರಿಗೆ ಸರ್ಕಾರದಿಂದ ಹಂಚಿಕೆ ಮಾಡಲಾಗಿದ್ದ ಭೂಮಿಯನ್ನು ಪ್ರಭಾವಿ ವ್ಯಕ್ತಿಗಳು ಅಕ್ರಮವಾಗಿ ಖರೀದಿ ಮಾಡಿರುವ ಬಗ್ಗೆ ಹಾಗೂ ಈ ಸಂಬಂಧ ಸರ್ಕಾರಕ್ಕೆ ತಪ್ಪು ಮಾಹಿತಿ ನೀಡಿರುವ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವ ಬಗ್ಗೆ **ಮಾನ್ಯ ಕಂದಾಯ** ಸಚಿವರ ಗಮನ ಸೆಳೆಯುವುದು.

10. **ಶ್ರೀಮತಿ ಹೇಮಲತಾ ನಾಯಕ** ಅವರು ರಾಜ್ಯದಲ್ಲಿ ಸರ್ಕಾರಿ ಗೋಶಾಲೆಗಳನ್ನು ಸ್ಥಾಪಿಸಿ ಅನುದಾನ ಮಂಜೂರಾಗಿದ್ದರೂ ಅಸಮರ್ಪಕ ನಿರ್ವಹಣೆಯಿಂದಾಗಿ ಗೋಶಾಲೆಗಳನ್ನು ಮುಚ್ಚುವ ಸ್ಥಿತಿ ತಲುಪಿರುವ ಬಗ್ಗೆ **ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ** ಸಚಿವರ ಗಮನ ಸೆಳೆಯುವುದು.

## 8. ನಿಯಮ 330ರ ಮೇರೆಗೆ

1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಸಿ.ಟಿ. ರವಿ, ಡಾ: ತಳವಾರ್ ಸಾಬಣ್ಣ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಇತರರು** ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು, ನಿಗಮ/ಮಂಡಳಿಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡದೇ, ರಾಜ್ಯ ಸರ್ಕಾರವು ವಿಳಂಬ ನೀತಿಯನ್ನು ಅನುಸರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಗಳು)**

2. **ಡಾ: ಕೆ. ಗೋವಿಂದರಾಜ್** ಅವರು ಬೆಂಗಳೂರಿನ ಸುತ್ತಮುತ್ತಲಿನ 110 ಹಳ್ಳಿಗಳ ಸರ್ವತೋಮುಖ ಬೆಳವಣಿಗೆಗೆ ಬಿ.ಬಿ.ಎಂ.ಪಿ ಮತ್ತು ರಾಜ್ಯ ಸರ್ಕಾರ ಅನುದಾನ ಬಿಡುಗಡೆ ಮಾಡಿದ್ದರೂ ಕುಡಿಯುವ ನೀರು, ಒಳಚರಂಡಿ ವ್ಯವಸ್ಥೆ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳು ಕುಂಠಿತವಾಗಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಉಪ ಮುಖ್ಯಮಂತ್ರಿಗಳು)**

3. **ಶ್ರೀಯುತರುಗಳಾದ ಸೂರಜ್ ರೇವಣ್ಣ, ಎಸ್.ಎಲ್. ಭೋಜೇಗೌಡ, ನಿರಾಣಿ ಹಣಮಂತ್ ರುದ್ರಪ್ಪ, ಕೇಶವ ಪ್ರಸಾದ್ ಎಸ್ ಹಾಗೂ ಸಿ.ಎನ್. ಮಂಜೇಗೌಡ** ಅವರುಗಳು ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕಿನ ದಂಡಿಗಾನ ಹಳ್ಳಿ, ಹೋಬಳಿ, ಬಳದರೆ ಗ್ರಾಮದ ಸರ್ವೆ ನಂ.260ರ ಪೈಕಿ 2 ಎಕರೆ 20 ಗುಂಟೆಯಲ್ಲಿ ರಾಷ್ಟ್ರೀಯ ಮತ್ತು ಜಿಲ್ಲಾ ರಸ್ತೆಯ ನಿಯಮಗಳನ್ನು ಉಲ್ಲಂಘಿಸಿ ಅಕ್ರಮ ವಾಣಿಜ್ಯ ಕಟ್ಟಡವನ್ನು ನಿರ್ಮಿಸಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

4. **ಶ್ರೀ ಪುಟ್ಟಣ್ಣ ಹಾಗೂ ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರುಗಳು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ 2002 ಮತ್ತು 2025ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಮಾಡಲು ಬಿ.ಎಲ್.ಓ.ಗಳಾಗಿ ಹಾಗೂ ಮನೆ ಮನೆ ಸಮೀಕ್ಷೆಗೆ ಪ್ರೌಢ ಶಾಲಾ ಶಿಕ್ಷಕರನ್ನು ಹೊರತುಪಡಿಸಿ ಇತರೆ ಇಲಾಖೆಗಳ ಸಿಬ್ಬಂದಿಯನ್ನು ನಿಯೋಜಿಸುವ ಕುರಿತು ಪ್ರಸ್ತಾಪಿಸುವುದು. (**ಮಾನ್ಯ ಉಪ ಮುಖ್ಯಮಂತ್ರಿಗಳು)**

5. **ಶ್ರೀ ಐವನ್ ಡಿ'ಸೋಜಾ** ಅವರು ಸಾಮಾಜಿಕ ಭದ್ರತಾ ಯೋಜನೆಗಳ ಆದಾಯ ಮಿತಿಯನ್ನು ಗ್ರಾಮೀಣ ಹಾಗೂ ನಗರ ಪ್ರದೇಶಗಳಿಗೆ ಏಕರೂಪವಾಗಿ ಹೆಚ್ಚಿಸುವುದರ ಜೊತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜಂಟಿ ಪಿಂಚಣಿ ಯೋಜನೆ ಫಲಾನುಭವಿಗಳ ಸ್ಥಿತಿಗತಿಗಳ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಗಳು)**

6. **ಶ್ರೀ ರಮೇಶ್ ಬಾಬು** ಅವರು ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನದ ಸಮರ್ಪಕ ಅನುಷ್ಠಾನದ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು)**

7. **ಶ್ರೀ ಶಿವಕುಮಾರ್ ಕೆ.** ಅವರು ಕರ್ನಾಟಕಕ್ಕೆ ಕೃಷ್ಣಾ ನದಿಯಲ್ಲಿ ಹಂಚಿಕೆಯಾಗಿರುವ ನೀರಿನ ಪಾಲನ್ನು ಬಳಸಿಕೊಂಡು ಆಂಧ್ರಪ್ರದೇಶದ ಗಡಿ ಭಾಗದ ಕಾಲುವೆಗಳ ಮೂಲಕ ಪಾವಗಡ, ಬಾಗೇಪಲ್ಲಿ, ಮುಳಬಾಗಲು ಮುಂತಾದ ತಾಲ್ಲೂಕುಗಳಿಗೆ ಕುಡಿಯುವ ನೀರನ್ನು ಒದಗಿಸುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಜಲಸಂಪನ್ಮೂಲ ಸಚಿವರು)**

..7

೮. **ಶ್ರೀ ಟಿ.ಎನ್. ಜವರಾಯಿ ಗೌಡ** ಅವರು ನೋಂದಣಿ ಕಾಯಿದೆ (ಕರ್ನಾಟಕ ತಿದ್ದುಪಡಿ) ಅಧಿನಿಯಮ, 2025 ಜಾರಿಗೆ ತಂದಿರುವ ತಿದ್ದುಪಡಿಯ ರೀತ್ಯಾ, ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ನೋಂದಾಯಿತ ಜಿ.ಪಿ.ಎ.ಗಳನ್ನು ಮಾತ್ರ ಪುರಸ್ಕರಿಸುತ್ತಿದ್ದು, ಈ ಹಿಂದೆ ನೋಟರಿಯವರಿಂದ ಮತ್ತು ನೋಂದಣಿಯಾಗದಿರುವ ಜಿ.ಪಿ.ಎ.ಗಳು ಪರಿಗಣಿಸದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council/council.htm**